# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಡಾ. ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ)

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 627

ಉತ್ತರಿಸಬೇಕಾದ ದಿನಾಂಕ : 12.07.2023

ಉತ್ತರಿಸಬೇಕಾದ ಸಚಿವರು : ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಹಾಲು ಉತ್ಪಾದಿಸುವ ರೈತರಿಗೆ ಹಾಲಿಗೆ ಸರಿಯಾದ ಬೆಲೆ ಸಿಗದಿರುವುದು ಹಾಗೂ ಉತ್ಪಾದನಾ ವೆಚ್ಚ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ | ಕೆಲವೊಂದು ರಾಜ್ಯಗಳಲ್ಲಿ ಹಾಲಿಗೆ ಉತ್ತಮ ಬೆಲೆ ಕೊಡುತ್ತಿರುವಂತೆ ಕರ್ನಾಟಕ ರಾಜ್ಯದಲ್ಲಿಯೂ ಸಹ ಹಾಲಿನ ಬೆಲೆಯನ್ನು ಹೆಚ್ಚಿಸಬಹುದಲ್ಲವೇ; | ಗ್ರಾಹಕರ ಹಾಲಿನ ಮಾರಾಟ ದರ ಹೆಚ್ಚಿಸುವ ಪ್ರಸ್ತಾವನೆ ಚರ್ಚೆ ಹಂತದಲ್ಲಿರುತ್ತದೆ. |
| ಇ | ಪಶು ಅಹಾರವನ್ನು ಇಂತಹ ಉತ್ಪಾದಕ ರೈತರಿಗೆ ಸಬ್ಸಿಡಿ ದರದಲ್ಲಿ ಕೊಡಬಹುದಲ್ಲವೇ; | ಕರ್ನಾಟಕ ಹಾಲು ಮಹಾಮಂಡಳವು ಕೊರೋನಾ ಸಂದರ್ಭದಲ್ಲಿ ಪ್ರತಿ ಮೆಟ್ರಿಕ್ ಟನ್ ಪಶು ಆಹಾರಕ್ಕೆ ರೂ.1,500/- ರಿಂದ 2,000/- ರವರೆಗೆ ರಿಯಾಯಿತಿಯನ್ನು ನೀಡಲಾಗುತ್ತಿತ್ತು. ಆದರೆ ಪ್ರಸ್ತುತ ಪಶು ಆಹಾರದ ಉತ್ಪಾದನೆಗೆ ಬಳಸುವ ಕಚ್ಚಾ ಪದಾರ್ಥಗಳ ಬೆಲೆ ಹೆಚ್ಚಿರುವುದರಿಂದ, ಯಾವುದೇ ರಿಯಾಯಿತಿಯಿಲ್ಲದೆ ಉತ್ಪಾದಿಸುವ ಪಶು ಆಹಾರವನ್ನು ಯಾವುದೇ ಲಾಭ ನಷ್ಟವಿಲ್ಲದೇ ಹಾಲು ಉತ್ಪಾದಕರಿಗೆ ಸರಬರಾಜು ಮಾಡಲಾಗುತ್ತಿದೆ. |
| ಈ | ಗೋಹತ್ಯೆ ನಿಷೇದ ಕಾಯ್ದೆ ಜಾರಿಯಾದ ನಂತರ ಈಗಿರುವ ಪಶುವೈದ್ಯಾಧಿಕಾರಿಗಳೇ ಎಲ್ಲಾ ಕರ್ತವ್ಯಗಳನ್ನು ನಿಭಾಯಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವಿವರಿಸುವುದು? | ಗೋಹತ್ಯೆಯ ನಿಷೇಧಕಾಯ್ದೆ ಜಾರಿಯಾದ ನಂತರ ಇಲಾಖೆಯ ವೈದ್ಯಾಧಿಕಾರಿಗಳು ಈ ಕೆಳಕಂಡ ಕರ್ತವ್ಯವನ್ನು ನಿರ್ವಹಿಸುತ್ತಿದ್ದಾರೆ.<br><br>1. ಸರ್ಕಾರಿ ಗೋಶಾಲೆ ವ್ಯಾಪ್ತಿ ಪ್ರದೇಶದ ಪಶುವೈದ್ಯಾಧಿಕಾರಿಗಳು ಗೋಶಾಲೆಯ ದೈನಂದಿನ ಚಟುವಟಿಕೆಗಳು ಹಾಗೂ ತಾಲ್ಲೂಕಿನ ಸಹಾಯಕ ನಿರ್ದೇಶಕರು ಗೋಶಾಲೆಯ ಸಂಪೂರ್ಣ ನಿರ್ವಹಣೆ ಮಾಡುತ್ತಿದ್ದಾರೆ. |

..2

| | | |
|---|---|---|
| | | 2. ಈ ಕಾಯ್ದೆಯಡಿ ಅನಧಿಕೃತವಾಗಿ ಜಾನುವಾರುಗಳ ಸಾಗಾಣಿಕೆ ಸಮಯದಲ್ಲಿ ವಶಪಡಿಸಿಕೊಂಡ ಜಾನುವಾರುಗಳನ್ನು ಗೋಶಾಲೆಗಳಿಗೆ ಕಳುಹಿಸಲು ಪೊಲೀಸ್ ಇಲಾಖೆಗೆ ಸಹಕಾರ ನೀಡುವುದು. |

**ಇ- ಪಸಂಮೀ 117 ಸಲೆವಿ 2023**

**(ಕೆ. ವೆಂಕಟೇಶ್)**
**ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು**